## ಹಿಂಬರಹ

ಸಂಖ್ಯೆ: ಡಿಟಿಇ 1 ಇಎಸ್‌ಟಿ(9) 2017 /34 ದಿನಾಂಕ: 12-05-2017

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 19 ಎಸ್‌ಆರ್‌ಪಿ 2017 ಬೆಂಗಳೂರು ದಿನಾಂಕ:04.04.2017ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಪೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು, [ಆಡಳಿತ], ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಹಾಗೂ ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ.(8)ಬಿ ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ನಗದು ವಿಭಾಗಕ್ಕೆ ಮಾಹಿತಿಗಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿರುವ ಬೋಧಕ ವರ್ಗದವರಿಗೆ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳಿಗೆ/ಎನ್‌ಜೆಪಿಸಿ ನಿವೃತ್ತಿ ವೇತನದಾರರಿಗೆ ತುಟ್ಟಿ ಭತ್ಯೆಯನ್ನು ಮಂಜೂರು ಮಾಡುವ ಕುರಿತು.

ಓದಲಾಗಿದೆ: (1) ಸ.ಆ. ಸಂಖ್ಯೆ: ಎಫ್‌ಡಿ 10 ಎಸ್‌ಆರ್‌ಪಿ 2013, ದಿನಾಂಕ: 20-05-2013.
(2) ಸ.ಆ. ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2013(II), ದಿನಾಂಕ: 12-06-2013.
(3) ಸ.ಆ. ಸಂಖ್ಯೆ: ಎಫ್‌ಡಿ 22 ಎಸ್‌ಆರ್‌ಪಿ 2013, ದಿನಾಂಕ: 10-10-2013.
(4) ಸ.ಆ. ಸಂಖ್ಯೆ: ಎಫ್‌ಡಿ 07 ಎಸ್‌ಆರ್‌ಪಿ 2014, ದಿನಾಂಕ: 11-04-2014.
(5) ಸ.ಅ. ಸಂಖ್ಯೆ: ಎಫ್‌ಡಿ 18 ಎಸ್‌ಆರ್‌ಪಿ 2014, ದಿನಾಂಕ: 01-10-2014.
(6) ಸ.ಅ. ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2015, ದಿನಾಂಕ: 08-05-2015.
(7) ಸ.ಅ. ಸಂಖ್ಯೆ: ಎಫ್‌ಡಿ 19 ಎಸ್‌ಆರ್‌ಪಿ 2015 ದಿನಾಂಕ: 08-10-2015.
(8) ಸ.ಅ. ಸಂಖ್ಯೆ: ಎಫ್‌ಡಿ 18 ಎಸ್‌ಆರ್‌ಪಿ 2016 ದಿನಾಂಕ: 18-04-2016
(9) ಸ.ಅ. ಸಂಖ್ಯೆ: ಎಫ್‌ಡಿ 34 ಎಸ್‌ಆರ್‌ಪಿ 2016 ದಿನಾಂಕ: 28-10-2016.

**ಸರ್ಕಾರಿ ಆದೇಶ ಸಂಖ್ಯೆ: ಆಇ 19 ಎಸ್‌ಆರ್‌ಪಿ 2017,**
**ಬೆಂಗಳೂರು, ದಿನಾಂಕ: 4ನೇ ಏಪ್ರಿಲ್ 2017.**

ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿರುವ ಬೋಧಕ ಸಿಬ್ಬಂದಿಗಳಿಗೆ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ವೇತನದ **ಶೇ.132%** ರಿಂದ **ಶೇ. 136%**ಕ್ಕೆ ಹೆಚ್ಚಿಸಿ **ದಿನಾಂಕ 1ನೇ ಜನವರಿ 2017** ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ಯುಜಿಸಿ/ಐಸಿಎಆರ್/ಎಐಸಿಟಿಇ ಮತ್ತು ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ಮೂಲ ವೇತನಕ್ಕೆ ಇನ್ನಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

4. ಎನ್‌ಜೆಪಿಸಿ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಹಾಲಿ ಲಭ್ಯವಿರುವ ತುಟ್ಟಿ ಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ **ಶೇ.132%** ರಿಂದ **ಶೇ. 136%**ಕ್ಕೆ ಹೆಚ್ಚಿಸಿ ದಿನಾಂಕ **1ನೇ ಜನವರಿ 2017** ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

5. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿ ಭತ್ಯೆಯನ್ನು ಮುಂದಿನ ಆದೇಶ ಹೊರಡಿಸುವವರೆಗೆ ನಗದಾಗಿ ಪಾವತಿ ಮಾಡಲಾಗುವುದು.

6. ತುಟ್ಟಿ ಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

7. ತುಟ್ಟಿ ಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಬಿ.ಹೇಮಣ್ಣ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು (ಮುಖ ಪತ್ರದೊಂದಿಗೆ).

ಇವರಿಗೆ:
1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
4. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ. 5398), ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398) ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ. ನಂ.5329), ಬೆಂಗಳೂರು.
7. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
8. ರಿಜಿಸ್ಟ್ರಾರ್ ಜನರಲ್ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
11. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
12. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
13. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
16. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'ಬಿ'. ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
20. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.kar.nic.in ವೀಕ್ಷಿಸಿ.**